ನಗರದಲ್ಲಿ ಬಾಡಿಗೆ ಕಟ್ಟಡದಲ್ಲಿರುವ ಎಲ್ಲಾ ಸರ್ಕಾರಿ ಕಛೇರಿಗಳನ್ನು ಒಂದೇ ಕಡೆ ತರುವ ಆಲೋಚನೆ ಸರ್ಕಾರದ ಮುಂದಿದೆಯೇ;

ಇಂತಹ ಯಾವುದೇ ತೀರ್ಮಾನವನ್ನು ಸದ್ಯಕ್ಕೆ ತೆಗೆದುಕೊಂಡಿರುವುದಿಲ್ಲ.

ಊ) ಹಾಗಿದ್ದಲ್ಲಿ ಈ ಕಾರ್ಯವನ್ನು ಯಾವಾಗ ಆರಂಭಿಸಲಾಗುವುದು (ವಿವರ ನೀಡುವುದು)

ಸಂಖ್ಯೆ:ಹೆಚ್‌ಡಿ 58 ಪಿಆರ್‌ಎ 2009

ಸಹಿ/-
(ಉಮೇಶ್ ವಿ. ಕತ್ತಿ)
ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು

(ಟಿ. ಕೃಷ್ಣಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಸೆರಮನೆ ಮತ್ತು ಸಿನಿಮಾ)

ಕರ್ನಾಟಕ ವಿಧಾನ ಸಭೆ

349 ಶ್ರೀ ಅಪ್ಪಾಸಾಹೇಬ ಮಲ್ಲಪ್ಪ ಪಟ್ಟಣಶೆಟ್ಟಿ
ಕೃಷಿ ಸಚಿವರು

ಅ) ರಾಜ್ಯದಲ್ಲಿ ವಿದರ್ಭ ಪ್ಯಾಕೇಜ್ ಲಾಭವನ್ನು ಪಡೆಯುತ್ತಿರುವ ಜಿಲ್ಲೆಗಳು/ಪ್ರದೇಶಗಳು ಯಾವುವು? ವಿಧರ್ಬ ಪ್ಯಾಕೇಜ್‌ನ ಉದ್ದೇಶಗಳೇನು?

ರಾಜ್ಯದಲ್ಲಿ ಮಾನ್ಯ ಪ್ರಧಾನ ಮಂತ್ರಿಗಳ ಪುನರ್ವಸತಿ ಪ್ಯಾಕೇಜದಲ್ಲಿ ಇರುವ ಜಿಲ್ಲೆಗಳು ಬೆಳಗಾಂ, ಶಿವಮೊಗ್ಗ ಚಿತ್ರದುರ್ಗ, ಚಿಕ್ಕಮಗಳೂರು, ಹಾಸನ ಮತ್ತು ಕೊಡಗು ಮಾನ್ಯ ಪ್ರಧಾನ ಮಂತ್ರಿಗಳ ಪುನರ್ವಸತಿ ಪ್ಯಾಕೇಜನ್ನು (ವಿದರ್ಭ ಪ್ಯಾಕೇಜ್) ಸಂಕಷ್ಟದಲ್ಲಿರುವ ರೈತರಿಗೆ ವಿವಿಧ ಯೋಜನೆಯಡಿಯಲ್ಲಿ ಸಹಾಯಧನ ನೀಡುವುದು ಮತ್ತು ರೈತರ ಅಭಿವೃದ್ಧಿಗೆ ಸಾಧ್ಯವಾಗುವ ಸುಸ್ಥಿರ ಬೇಸಾಯ ಪದ್ಧತಿಗಳನ್ನು ಅಳವಡಿಸುವುದು ಮುಖ್ಯ ಉದ್ದೇಶ.

ಆ) ಹೊಸದಾಗಿ ಯಾವ ಯಾವ ಜಿಲ್ಲೆಗಳನ್ನು ಈ ಯೋಜನೆಯಡಿ ಸೇರಿಸಲು ಸರ್ಕಾರ ಕ್ರಮ ಕೈಗೊಂಡಿದೆ?

ಈ ಕಾರ್ಯಕ್ರಮಕ್ಕೆ ಹೆಚ್ಚಿನ ಜಿಲ್ಲೆಗಳನ್ನು ಸೇರಿಸಲು ಅವಕಾಶವಿರುವುದಿಲ್ಲ.

ಇ) ವಿಜಾಪುರ ಜಿಲ್ಲೆಯ ರೈತರು ಕಳೆದ 5–6 (ಐದಾರು)ವರ್ಷಗಳಿಂದ ಮಳೆ ಇಲ್ಲದೆ ಬರಗಾಲಕ್ಕೆ ತುತ್ತಾಗಿ ಆತ್ಮಹತ್ಯೆಗೆ ಶರಣಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಹೌದು.

ಈ) ವಿದರ್ಭ ಪ್ಯಾಕೇಜ್ ಮಾದರಿಯಂತೆಯೇ, ವಿಜಾಪುರ ಜಿಲ್ಲೆಗೆ ವಿಶೇಷ ಪ್ಯಾಕೇಜ್ ಘೋಷಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಇಲ್ಲ.

ಉ) ಹಾಗಿದ್ದಲ್ಲಿ ರೈತರ ಅನುಕೂಲಕ್ಕಾಗಿ ಸರ್ಕಾರವು ಯಾವ ಯಾವ ಕ್ರಮಗಳನ್ನು/ಯೋಜನೆಗಳನ್ನು ಕೈಗೊಂಡಿದೆ(ವಿವರ ನೀಡುವುದು)

ರೈತರ ಅನುಕೂಲಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಸಂಖ್ಯೆ: ಕೃತೋಇ/47/ಕೃಉಇ/2009

ಕೃಷಿ ಸಚಿವರು.

ಅನುಬಂಧ

ರೈತರ ಅನುಕೂಲಕ್ಕಾಗಿ ಸರ್ಕಾರವು ಕೈಗೊಂಡಿರುವ ಕ್ರಮಗಳು:

1. ಶೇಕಡಾ 3ರ ಬಡ್ಡಿ ದರದಲ್ಲಿ ಸಹಕಾರಿ ಸಂಸ್ಥೆಗಳ ಮೂಲಕ ರೈತರಿಗೆ ಸಾಲ ನೀಡುವುದು.
2. ರಿಯಾಯಿತಿ ದರದಲ್ಲಿ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಬಿತ್ತನೆ ಬೀಜ ಹಾಗೂ ಇತರೆ ಪರಿಕರಗಳನ್ನು ವಿತರಿಸುವುದು.
3. ಬೆಂಬಲ ಬೆಲೆಗಿಂತ ಮಾರುಕಟ್ಟೆಯಲ್ಲಿ ಕೃಷಿ ಉತ್ಪನ್ನಗಳ ದರವು ಕುಸಿದಲ್ಲಿ ಮಾರುಕಟ್ಟೆ ಮಧ್ಯೆ ಪ್ರವೇಶದ ಮೂಲಕ ರೈತರ ಕೃಷಿ ಉತ್ಪನ್ನಗಳ ಖರೀದಿ.
4. ಟ್ರಾಕ್ಟರ್, ಪವರ್ ಟಿಲ್ಲರ್ ಮತ್ತು ಹೈಟೆಕ್ ಕೃಷಿ ಉಪಕರಣಗಳನ್ನು ರಿಯಾಯಿತಿ ದರದಲ್ಲಿ ವಿತರಣೆ.
5. ಕೃಷಿ ತಾಂತ್ರಿಕತೆಯ ಬಗ್ಗೆ ರೈತರಿಗೆ ತರಬೇತಿ.
6. ರಿಯಾಯಿತಿಯಲ್ಲಿ ಹನಿ ನೀರಾವರಿಗೆ ಮತ್ತು ತುಂತುರು ನೀರಾವರಿ ಉಪಕರಣಗಳ ವಿತರಣೆ.
7. ಸಾಗುವಳಿ ವೆಚ್ಚ ಕಡಿಮೆ ಮಾಡಲು ಸಾವಯವ ಕೃಷಿ ಹಾಗೂ ಜೀವಾಣು ಗೊಬ್ಬರ ಪ್ರೋತ್ಸಾಹಿಸಲಾಗುತ್ತಿದೆ.
8. ಮಣ್ಣು ಪರೀಕ್ಷೆ ಆಧಾರದ ಮೇಲೆ ಮಣ್ಣಿನ ಫಲವತ್ತತೆ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.
9. ಕೀಟನಾಶಕ, ರೋನಾಶಕಗಳು ಹಾಗೂ ಸಿಂಪರಣಾ ಯಂತ್ರಗಳನ್ನು ಸೂಕ್ತ ಸಮಯದಲ್ಲಿ ರಿಯಾಯಿತಿ ದರದಲ್ಲಿ ಒದಗಿಸಲಾಗುತ್ತಿದೆ.

10. ಎಣ್ಣೆಕಾಳು, ದ್ವಿದಳ ಧಾನ್ಯ, ಹತ್ತಿ ಬೆಳೆಗಳಿಗೂ ಸಹ ರಿಯಾಯಿತಿ ದರದಲ್ಲಿ ವಿವಿಧ ಸವಲತ್ತುಗಳನ್ನು ಒದಗಿಸಲಾಗುತ್ತಿದೆ.
11. 2008–09ನೇ ಸಾಲಿನಲ್ಲಿ ಒಣ ಬೇಸಾಯದಡಿಯಲ್ಲಿ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ರೂ.1000/– ಸಹಾಯಧನ ನೀಡಲಾಗುತ್ತಿದೆ.
12. ರಸಗೊಬ್ಬರ ಮತ್ತು ವಿದ್ಯುಚ್ಛಕ್ತಿಯನ್ನು ರಿಯಾಯಿತಿ ದರದಲ್ಲಿ ನೀಡಲಾಗುತ್ತಿದೆ.
13. ಅಲ್ಲದೆ ಕೃಷಿಗೆ ಸಂಬಂಧಪಟ್ಟ ಇತರೆ ವಿಷಯಗಳನ್ನು ಜಾರಿಗೆ ತರಲಾಗಿದೆ.

ಕರ್ನಾಟಕ ವಿಧಾನ ಸಭೆ

351 ಶ್ರೀ ಸಂಪಂಗಿ ಎನ್ (ಬಾಗೇಪಲ್ಲಿ)

ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು

ಅ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ 1999 ರಿಂದ 2004 ರವರೆಗೂ ಎಷ್ಟು ಬಿಪಿಎಲ್ ಮತ್ತು ಎಪಿಎಲ್ ಕಾರ್ಡುಗಳು, ಅಂತ್ಯೋದಯ ಕಾರ್ಡುಗಳು ವಿತರಣೆಯಾಗಿವೆ (ತಾಲ್ಲೂಕುವಾರು ಕಾರ್ಡುಗಳ ವಿವರಣೆ ಒದಗಿಸುವುದು);

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ 1999 ರಿಂದ 2004ರವರೆಗೂ ವಿತರಿಸಿರುವ ಬಿಪಿಎಲ್ ಮತ್ತು ಎಪಿಎಲ್ ಕಾರ್ಡುಗಳು, ಅಂತ್ಯೋದಯ ಕಾರ್ಡುಗಳ ವಿವರ ಕೆಳಕಂಡಂತಿದೆ:

ಕ್ರ. ಸಂ.	ತಾಲ್ಲೂಕು	ಅಂತ್ಯೋದಯ	ಬಿಪಿಎಲ್	ಎಪಿಎಲ್
1	ಚಿಕ್ಕಬಳ್ಳಾಪುರ	2918	26523	15550
2	ಚಿಂತಾಮಣಿ	3390	41531	15723
3	ಶಿಡ್ಲಘಟ್ಟ	2956	29382	8424
4	ಗೌರಿಬಿದನೂರು	4796	43435	8121
5	ಬಾಗೇಪಲ್ಲಿ	4398	30856	5046
6	ಗುಡಿಬಂಡೆ	787	10694	1272
	ಒಟ್ಟು	19245	182421	54136

ಆ) 2004 ರಿಂದ ಈವರೆಗೂ ಅಂದರೆ 2008ನೇ ಸಾಲಿನವರೆಗೂ ವಿತರಣೆಯಾಗಿರುವ ಬಿಪಿಎಲ್ ಮತ್ತು ಅಂತ್ಯೋದಯ ಕಾರ್ಡುಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ಕಾರ್ಡುತಗಳ ವಿವರಣೆ ಒದಗಿಸುವುದು);

2004 ರಿಂದ ಈವರೆಗೂ ಅಂದರೆ 2008ನೇ ಸಾಲಿನವರೆಗೂ ವಿತರಣೆಯಾಗಿರುವ ಬಿಪಿಎಲ್ ಮತ್ತು ಅಂತ್ಯೋದಯ ಕಾರ್ಡುಗಳ ಸಂಖ್ಯೆ ವಿವರ ಕೆಳಕಂಡಂತಿದೆ:–